ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 365
ಸದಸ್ಯರ ಹೆಸರು : ಶ್ರೀ ಅಪ್ಪಾಜಿಗೌಡ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 15.12.2021
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಮಂಡ್ಯ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಇರುವ ಅರ್ಜಿಗಳೆಷ್ಟು; (ತಾಲೂಕುವಾರು, ಪ್ರಕರಣಗಳವಾರು ವಿವರ ಒದಗಿಸುವುದು)	ಮಂಡ್ಯ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ 5793 ಅರ್ಜಿಗಳು ಭೂ ಪರಿವರ್ತನೆಗಾಗಿ ಸ್ವೀಕೃತವಾಗಿದ್ದು, ಅದರಲ್ಲಿ ವಸತಿ, ವಾಣಿಜ್ಯ ಕೈಗಾರಿಕೆ ಹಾಗೂ ಇತರೆ ಉದ್ದೇಶಗಳಿಗಾಗಿ ಸ್ವೀಕೃತವಾಗಿರುತ್ತವೆ. ಒಟ್ಟು 5585 ಅರ್ಜಿಗಳು ವಿಲೇವಾರಿಯಾಗಿದ್ದು, 208 ಅರ್ಜಿಗಳು ವಿಲೇವಾರಿಯಾಗದೇ ಬಾಕಿ ಇರುತ್ತವೆ. 1. ತಾಲೂಕುವಾರು ವಿವರವನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. 2. ಪ್ರಕರಣಗಳವಾರು ವಿವರವನ್ನು ಅನುಬಂಧ-3 ರಲ್ಲಿ ನೀಡಲಾಗಿದೆ.
(ಆ)	ಮಂಡ್ಯ ಜಿಲ್ಲೆಯಲ್ಲಿ ವಸತಿ ಹಾಗೂ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಕಳೆದ 3 ವರ್ಷಗಳಲ್ಲಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಇವುಗಳಲ್ಲಿ ವಿಲೇವಾರಿಯಾದ ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು? (ತಾಲೂಕುವಾರು, ಪ್ರಕರಣಗಳವಾರು ವಿವರ ಒದಗಿಸುವುದು)	ಮಂಡ್ಯ ಜಿಲ್ಲೆಯಲ್ಲಿ ವಸತಿ ಹಾಗೂ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಕಳೆದ 3 ವರ್ಷಗಳಲ್ಲಿ 4462 ಅರ್ಜಿಗಳು ಸಲ್ಲಿಕೆಯಾಗಿದ್ದು, ಅದರಲ್ಲಿ 4302 ಅರ್ಜಿಗಳು ವಿಲೇವಾರಿಯಾಗಿದ್ದು, 160 ಅರ್ಜಿಗಳು ಬಾಕಿ ಇರುತ್ತವೆ. 1. ತಾಲೂಕುವಾರು ವಿವರಗಳನ್ನು ಅನುಬಂಧ-2 ರಲ್ಲಿ ನೀಡಲಾಗಿದೆ. 2. ವಸತಿ ಮತ್ತು ಕೈಗಾರಿಕೆ ಪ್ರಕರಣಗಳವಾರು ವಿವರವನ್ನು ಅನುಬಂಧ-3ರಲ್ಲಿ ನೀಡಲಾಗಿದೆ.

(ಕಡತ ಸಂಖ್ಯೆ:ಕಂಇ 59 ಎಲ್‌ಜಿವ್ಯೆ 2021)

(ಆರ್.ಅಶೋಕ)
ಕಂದಾಯ ಸಚಿವರು